ಕರ್ನಾಟಕ ಪರೀಕ್ಷಾ ಪ್ರಾಧಿಕಾರ
Karnataka Examinations Authority

ಸಂಖ್ಯೆ: ಇಡಿ/ಕೆಇಎ/ಆಡಳಿತ/ಪಿ.ಆರ್.19/2020-21 ದಿನಾಂಕ: 19-11-2021

**ಪ್ರಕಟಣೆ**

ಕರ್ನಾಟಕ ರಾಜ್ಯದಲ್ಲಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳ ನೇರ ನೇಮಕಾತಿ ಸಂಬಂಧ, ಅರ್ಹ ಅಭ್ಯರ್ಥಿಗಳಿಂದ ಅರ್ಜಿಯನ್ನು ಆನ್‌ಲೈನ್ ಮೂಲಕ ಆಹ್ವಾನಿಸಿ, ಅರ್ಜಿ ಸಲ್ಲಿಸಲು ದಿನಾಂಕ 06-11-2021 ರ ವರೆಗೆ ಕಾಲಾವಕಾಶ ನೀಡಲಾಗಿತ್ತು. ನಂತರ, ದಿನಾಂಕ 02-11-2021 ರಂದು ಪ್ರಕಟವಾದ ಕೆ-ಸೆಟ್ ಪರೀಕ್ಷೆಯ ಫಲಿತಾಂಶದಲ್ಲಿ ಅರ್ಹತೆ ಪಡೆದ ಅಭ್ಯರ್ಥಿಗಳಿಗೆ ಹಾಗು ಇತರರಿಗೆ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳ ನೇಮಕಾತಿಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು 20-11-2021 ರ ವರೆಗೆ ಅವಕಾಶ ನೀಡಿ ವೇಳಾಪಟ್ಟಿಯನ್ನು ಪ್ರಕಟಿಸಲಾಗಿತ್ತು.

ಪ್ರಸ್ತುತ ಸಹಾಯಕ ಪ್ರಾಧ್ಯಾಪಕರ ನೇಮಕಾತಿಯ ಗಣಕವಿಜ್ಞಾನ, ರಾಜ್ಯಶಾಸ್ತ್ರ, ರಸಾಯನಶಾಸ್ತ್ರ, ಎಲೆಕ್ಟ್ರಾನಿಕ್ಸ್, ಸಸ್ಯ ಶಾಸ್ತ್ರ, ಪ್ರಾಣಿಶಾಸ್ತ್ರ, ಅರ್ಥಶಾಸ್ತ್ರ ಮತ್ತು ಭೌತಶಾಸ್ತ್ರ ಹುದ್ದೆಗಳಿಗೆ ತತ್ಸಮಾನ ವಿಷಯಗಳ ವಿದ್ಯಾರ್ಹತೆಯನ್ನು ನೀಡಿ, ಸದರಿ ತತ್ಸಮಾನ ವಿದ್ಯಾರ್ಹತೆಯು ಆಯಾ ವಿಷಯಗಳ ಹುದ್ದೆಗಳಿಗೆ ಸರಿಸಮಾನವೆಂದು ಸರ್ಕಾರವು ಅಧಿಸೂಚನೆ ಸಂಖ್ಯೆ ಇಡಿ 199 ಡಿಸಿಇ 2021 (ಭಾ) ದಿನಂಕ 18-11-2021 ರಲ್ಲಿ ಪರಿಗಣಿಸಿರುತ್ತದೆ. ಸದರಿ ಅಧಿಸೂಚನೆಯನ್ನು ಪ್ರಾಧಿಕಾರದ ವೆಬ್‌ಸೈಟಿನಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಲಾಗಿದೆ.

ಈ ಹಿನ್ನಲೆಯಲ್ಲಿ ಸಹಾಯಕ ಪ್ರಾಧ್ಯಾಪಕರ ನೇಮಕಾತಿಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಈ ಕೆಳಗಿನಂತೆ ದಿನಾಂಕಗಳನ್ನು ವಿಸ್ತರಿಸಲಾಗಿದೆ. ಸಹಾಯಕ ಪ್ರಾಧ್ಯಾಪಕರ ನೇಮಕಾತಿಗೆ ಅರ್ಜಿ ಸಲ್ಲಿಸದೇ ಇರುವ ಅರ್ಹ ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ.

ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ ವಿಸ್ತರಣೆ: 30-11-2021 ರಾತ್ರಿ 11.59 ರ ವರೆಗೆ

ಶುಲ್ಕ ಪಾವತಿಸಲು ಕೊನೆಯ ದಿನಾಂಕ ವಿಸ್ತರಣೆ: 06-12-2021 (ಕಚೇರಿ ವೇಳೆಯಲ್ಲಿ)

ದಿನಾಂಕ 30-09-2021 ರ ಅಧಿಸೂಚನೆಯಲ್ಲಿ ನೀಡಿರುವ ಎಲ್ಲಾ ಮಾನದಂಡಗಳು ಯಥಾವತ್ತಾಗಿ ಅನ್ವಯಿಸುತ್ತದೆ.

ಕಾರ್ಯನಿರ್ವಾಹಕ ನಿರ್ದೇಶಕರು.

**18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012**
18th Cross, Sampige Road, Malleshwaram, Bengaluru - 560 012.
Phone: 080 - 23 564 583, 23 460 460, 23 361 786, Fax: 080 - 23 461 576
e-mail : keauthority-ka@nic.in Website : http://kea.kar.nic.in